ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 168(1339)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಮಾನೆ ಶ್ರೀನಿವಾಸ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಪಂಚಾಕ್ಷರಿ ಗವಾಯಿಗಳ ಪ್ರಾಧಿಕಾರ ರಚನೆ ಕುರಿತು

(ಅ) ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನ ಕಾಡಶೆಟ್ಟಿಹಳ್ಳಿ ಗ್ರಾಮವು, ನಾದಬ್ರಹ್ಮ, ಅಂಧ ಅನಾಥರ ಬೆಳಕಾದ ಗಾನಯೋಗಿ ಪಂಡಿತ ಪಂಚಾಕ್ಷರಿ ಗವಾಯಿಗಳರವರ ಹುಟ್ಟೂರು ಎಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪಂಡಿತ ಪಂಚಾಕ್ಷರಿ ಗವಾಯಿಗಳರವರ ಗೌರವಾರ್ಥ, ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನ ಕಾಡಶೆಟ್ಟಿಹಳ್ಳಿ ಗ್ರಾಮವನ್ನು ಕೇಂದ್ರವನ್ನಾಗಿಸಿಕೊಂಡು, ಪ್ರಾಧಿಕಾರ ರಚನೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಪ್ರಾಧಿಕಾರ ರಚನೆ ಮಾಡಲು ಸರ್ಕಾರಕ್ಕೆ ಬೇಕಾಗುವ ಕಾಲಾವಕಾಶವೆಷ್ಟು; ಹಾಗೂ ಪ್ರಾಧಿಕಾರಕ್ಕೆ ಸರ್ಕಾರವು ಮೀಸಲಿಡುವ ಅನುದಾನವೆಷ್ಟು?